# ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)

ದೂರವಾಣಿ : 2404922
E-mail : aechtgmys@gmail.com

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ.) ರವರ ಕಛೇರಿ
ಚಾ.ವಿ.ಸ.ನಿ.ನಿ., ಹೂಟಗಳ್ಳಿ ಉಪ-ವಿಭಾಗ, ಹೂಟಗಳ್ಳಿ,
ಮೈಸೂರು.

ಕ್ರ.ಸಂ: ಸ.ಕಾ.ನಿ.ಇಂ(ವಿ)/ಸ.ಇಂ(ತಾ)/ಹೂ. 85 6?-68 ದಿನಾಂಕ : 17/1/19

## ಸಭಾ ನಡಾವಳಿ

ಹೂಟಗಳ್ಳಿ ಉಪವಿಭಾಗದಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್ ರವರ ಅಧ್ಯಕ್ಷತೆಯಲ್ಲಿ ದಿನಾಂಕ : 10.01.2019 ರಂದು ಬೆಳಗ್ಗೆ 11:00 ಗಂಟೆಗೆ ಜನ ಸಂಪರ್ಕ ಸಭೆಯನ್ನು ವಿದ್ಯುತ್ ಸಂಬಂಧಿತ ದೂರುಗಳು/ಕುಂದುಕೊರತೆಗಳ ಕುರಿತು ನಡೆದ ಸಭಾ ನಡಾವಳಿ.

ಸಭೆಗೆ ಹಾಜರಿದ್ದ ಅಧಿಕಾರಿ/ನೌಕರರು :-

1. ಶ್ರೀಯುತ ಚಿಕ್ಕಸಿದ್ದೇಗೌಡರು ರವರು, ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ, ವಿ.ವಿ.ಮೊಹಲ್ಲಾ ವಿಭಾಗ, ಚಾ.ವಿ.ಸ.ನಿ.ನಿ, ಮೈಸೂರು.
2. ಶ್ರೀ. ಉಮೇಶ್, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಚಾ.ವಿ.ಸ.ನಿ.ನಿ., ಹೂಟಗಳ್ಳಿ ಉಪವಿಭಾಗ, ಮೈಸೂರು.
3. ಶ್ರೀಮತಿ ಮಂಜುಳಾ, ಸಹಾಯಕ ಇಂಜಿನಿಯರ್(ತಾ), ಚಾ.ವಿ.ಸ.ನಿ.ನಿ, ಹೂಟಗಳ್ಳಿ ಉಪವಿಭಾಗ, ಮೈಸೂರು
4. ಶ್ರೀ ಮಂಜುನಾಥ, ಸಹಾಯಕ ಇಂಜಿನಿಯರ್(ವಿ), ಹೂಟಗಳ್ಳಿ ಶಾಖೆ.
5. ಶ್ರೀ ಸಂದೀಪ್, ಸಹಾಯಕ ಇಂಜಿನಿಯರ್(ವಿ), ಬೋಗಾದಿ ಶಾಖೆ.
6. ಶ್ರೀ ರಾಘವೇಂದ್ರ, ಕಿರಿಯ ಇಂಜಿನಿಯರ್(ವಿ), ಇಲವಾಲ ಶಾಖೆ.
7. ಶ್ರೀ ನಾಗೇಂದ್ರ, ಕಿರಿಯ ಇಂಜಿನಿಯರ್(ವಿ), ಬೀರಿಹುಂಡಿ ಶಾಖೆ.
8. ಶ್ರೀ. ಸ್ವಾಮಿ, ಕಿರಿಯ ಇಂಜಿನಿಯರ್(ವಿ), ಬೋಗಾದಿ ಶಾಖೆ.

*********

ಸಭೆಯಲ್ಲಿ ಉಪಸ್ಥಿತರಿದ್ದಂತಹ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆ ಪ್ರಾರಂಭಿಸಲಾಯಿತು. ಮಾನ್ಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರು ವಿದ್ಯುತ್ ಜನ ಸಂಪರ್ಕ ಸಭೆಯ ಮಹತ್ವದ ಬಗ್ಗೆ ತಿಳಿಸುತ್ತಾ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ನಿರ್ದೇಶನದನ್ವಯ ಪ್ರತಿ 3 ತಿಂಗಳಿಗೊಮ್ಮೆ ಉಪವಿಭಾಗ ಮಟ್ಟದಲ್ಲಿ ಜನಸಂಪರ್ಕ ಸಭೆಯನ್ನು ನಡೆಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ದಿನಾಂಕ : 17.11.2018 ರಂದು ನಡೆದ ಸಭೆಯಲ್ಲಿ ಸ್ವೀಕರಿಸಿದ ದೂರುಗಳು 2, ಈ ದೂರುಗಳು ಬಗ್ಗೆ ಹರಿದಿರುತ್ತದೆ.

ದಿನಾಂಕ : 10.01.2019 ರಂದು ಸ್ವೀಕೃತವಾದ ದೂರಿನ ಸಂಖ್ಯೆ : 0

...2...

ದಿನಾಂಕ : 10.01.2019 ರಂದು ಬೆಳಿಗ್ಗೆ : 11.00 ಗಂಟೆಗೆ ಹೂಟಗಳ್ಳಿ ಉಪವಿಭಾಗದಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರ ಅಧ್ಯಕ್ಷತೆಯಲ್ಲಿ ನಡೆದ ಜನ ಸಂಪರ್ಕ ಸಭೆಯಲ್ಲಿ ವಿದ್ಯುತ್ ಸಂಬಂಧಿತ ಯಾವುದೇ ದೂರುಗಳು ಸ್ವೀಕರವಾಗಿರುವುದಿಲ್ಲ. ಹಾಗೂ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರು ಉಪವಿಭಾಗದ ಕಾರ್ಯ ಮತ್ತು ವಸೂಲಾತಿಗಳ ಬಗ್ಗೆ ಸಭೆಯನ್ನು ಹಮ್ಮಿಕೊಂಡು ಉಪವಿಭಾಗದ ಶಾಖಾಧಿಕಾರಿಗಳಿಗೆ ತಮ್ಮ ಶಾಖಾ ವ್ಯಾಪ್ತಿಯ ದೂರುಗಳನ್ನು ತಕ್ಷಣವೇ ವಿಲೇವಾರಿ ಮಾಡುವುದು, ಹಾಗೂ ಫೀಡರ್ ನಿರ್ವಾಹಣೆ ಕಾರ್ಯಗಳನ್ನು ಮಾಡಿ ವಿದ್ಯುತ್ ಅಡಚಣೆಯಾಗುತ್ತಿರುವುದನ್ನು ಕಡಿಮೆಗೊಳ್ಳಿಸಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ),
ಸೆಸ್ಕ್, ಹೂಟಗಳ್ಳಿ ಉಪವಿಭಾಗ,
ಮೈಸೂರು.

ಪ್ರತಿಯನ್ನು :

1. ಅಧೀಕ್ಷಕ ಇಂಜಿನಿಯರ್(ವಿ), ಸೆಸ್ಕ್, ಕಾ ಮತ್ತು ಪಾ ವಿಭಾಗ, ಜೋಡಿ ಬಸವೇಶ್ವರ ರಸ್ತೆ, ಕುವೆಂಪುನಗರ, ಮೈಸೂರು ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
2. ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಚಾ.ವಿ.ಸ.ನಿ.ನಿ, ಕಾ ಮತ್ತು ಪಾ ವಿಭಾಗ, ವಿ.ವಿ.ಮೊಹಲ್ಲಾ, ಮೈಸೂರು ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
3. ಕಛೇರಿ ಪ್ರತಿ.

ದಿನಾಂಕ : 17.11.2019 ರಂದು ಹೂಟಗಳ್ಳಿ ಉಪವಿಭಾಗದಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರ ಅಧ್ಯಕ್ಷತೆಯಲ್ಲಿ ನಡೆದ ಜನ ಸಂಪರ್ಕ ಸಭೆಯ ಗ್ರಾಹಕರ ವಿದ್ಯುತ್ ಸಂಬಂಧಿತ ದೂರುಗಳು/ಕುಂದುಕೊರತೆಗಳ ಬಗ್ಗೆ ಕುಲಂಕುಷವಾಗಿ ಪರಿಶೀಲಿಸಿ ತೆಗೆದುಕೊಂಡ ಕ್ರಮದ ಬಗ್ಗೆ ಕೆಳಕಂಡಂತೆ ವಿವರಿಸಿದರು.

| ಕ್ರ.ಸಂ. | ಅರ್ಜಿದಾರರ ಹೆಸರು, ವಿಳಾಸ ಮತ್ತು ದೂರವಾಣಿ ಸಂಖ್ಯೆ | ವಿಷಯ | ಕ್ರಮ |
|---|---|---|---|
| 1. | ಶ್ರೀ ಗಂಗಾಧರ್ ಗೌಡ | ▪ ನೂತನವಾಗಿ ನಿರ್ಮಿಸಿರುವ ಮನೆಗೆ ಅರ್ಜಿ ಸಲ್ಲಿಸಿದ್ದು, ಕಟ್ಟಡವು ಎಂ.ಎಸ್ ಬಿಲ್ಡಿಂಗ್ ವ್ಯಾಪ್ತಿಗೆ ಬರುತ್ತಿದ್ದು, ಮಂಜೂರಾತಿ ನಕ್ಷೆ ಇಲ್ಲದೆ ವಿದ್ಯುತ್ ಸಂಪರ್ಕ ಪಡೆಯಲು ಅನುಮತಿ ನೀಡಲು ಕೋರಿದ್ದರು. | ▪ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರು ಉತ್ತರಿಸುತ್ತ, ಕೆ.ಇ.ಆರ್.ಸಿ ನಿಯಮಾನುಸಾರ ಯಾವುದೇ ಎಂ.ಎಸ್ ಬಿಲ್ಡಿಂಗ್ ಕಟ್ಟಡಕ್ಕೆ ಮಂಜೂರಾತಿ ನಕ್ಷೆ ಇಲ್ಲದೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸಾಧ್ಯವಿರುವುದಿಲ್ಲ. ಆದ್ದರಿಂದ ಮಂಜೂರಾತಿ ನಕ್ಷೆ ಸಲ್ಲಿಸಿದ ನಂತರ ವಿದ್ಯುತ್ ಸಂಪರ್ಕ ನೀಡಲು ಸೂಕ್ತ ಕ್ರಮವಹಿಸಲಾಗುವುದು ಎಂದು ತಿಳಿಸಿದರು. |
| | ಶ್ರೀ ಸಿದ್ದರಾಜು | ▪ ಕೆ.ಹೆಚ್.ಬಿ ಹಾಗೂ ಎನ್.ಹೆಚ್.ಬಿ ಕಾಲೋನಿ ವ್ಯಾಪ್ತಿಯಲ್ಲಿ ಬೀದಿ ದೀಪದ ಕಂಟ್ರೋಲ್ ಅಳವಡಿಸಿ ಕೊಡಲು ಕೋರಿರುದ್ದರು.<br>▪ ರಸ್ತೆ ಅಗಲೀಕರಣದಿಂದ್ದಾಗಿ ಕೆ.ಹೆಚ್.ಬಿ ಕಾಲೋನಿಯ ವ್ಯಾಪ್ತಿಯಲ್ಲಿ ಒಂದು ಕಂಬವನ್ನು ಸ್ಥಳಾಂತರಿಸಿ ಕೊಡಲು ಕೋರಿರುತ್ತಾರೆ. | ▪ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರು ಶಾಖಾಧಿಕಾರಿಗೆ ಸ್ಥಳ ಪರಿಶೀಲಿಸಿ, ಅಂದಾಜು ಪಟ್ಟಿ ತಯಾರಿಸಿ ಮುಂದಿನ ಕ್ರಮಕ್ಕೆ ಸಲ್ಲಿಸಲು ಸೂಚಿಸಿರುತ್ತಾರೆ.<br>▪ ಗ್ರಾಮ ಪಂಚಾಯಿತಿಯಿಂದ ಪತ್ರ ಪಡೆದು ಹೂಟಗಳ್ಳಿ ಉಪವಿಭಾಗಕ್ಕೆ ಸಲ್ಲಿಸಲು ಸೂಚಿಸಿದ್ದರು. ನಂತರ ಶಾಖಾಧಿಕಾರಿಯು ಸ್ಥಳ ಪರಿಶೀಲಿಸಿ ಅಂದಾಜುಪಟ್ಟಿ ತಯಾರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದರು. |